ವರದಿ ಬಿಡುಗಡೆ ■ ಅರಣ್ಯ ಅತಿಕ್ರಮಣ ಮಾಡುವವರ ವಿರುದ್ಧ ಕ್ರಮಕ್ಕೆ ಅವಕಾಶ

# ದೇವರಕಾಡು ಸಂರಕ್ಷಣೆ ಯೋಜನೆ ಕೈಬಿಡಲ್ಲ: ಬ್ಯಾನರ್ಜಿ

**ಸಾಗರ:** ಕಳೆದ ಅವಧಿಯಲ್ಲಿ ದೊಡ್ಡ ಪ್ರಮಾಣದಲ್ಲಿ ಘೋಷಣೆಯಾದ ದೇವರಕಾಡುಗಳ ಸಂರಕ್ಷಣೆಗೆ ಸಂಬಂಧಪಟ್ಟಂತೆ ಅನುದಾನದ ಕೊರತೆ ಇದೆ. ಆದರೆ ಸರ್ಕಾರ ಯಾವುದೇ ಕಾರಣಕ್ಕೂ ಈ ಯೋಜನೆಯನ್ನು ಕೈಬಿಡುವುದಿಲ್ಲ ಎಂದು ಉಪವಲಯ ಅರಣ್ಯ ಸಂರಕ್ಷಣಾಧಿಕಾರಿ ಪಿ.ಪಿ. ಬ್ಯಾನರ್ಜಿ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಮಲೆನಾಡು ಸಿರಿ ಸಭಾಂಗಣದಲ್ಲಿ ಭೀಮನಕೋಣೆ ಗ್ರಾಮ ಅರಣ್ಯ ಸಮಿತಿ, ವೃಕ್ಷಲಕ್ಷ ಆಂದೋಲನ, ಬೆಂಗಳೂರಿನ ಭಾರತೀಯ ವಿಜ್ಞಾನ ಮಂದಿರ ಹಾಗೂ ಗ್ರಾಮಾಂತರ ಸಮುದಾಯ ವಿಜ್ಞಾನ ಕೇಂದ್ರದ ವತಿಯಿಂದ ಶುಕ್ರವಾರ ದೇವರಕಾಡುಗಳ ಕುರಿತ ಜಾಗೃತಿ ಕಾರ್ಯಾಗಾರದಲ್ಲಿ ವಿಜ್ಞಾನಿ ಡಾ। ಟಿ.ವಿ. ರಾಮಚಂದ್ರ ಅವರ ನೇತೃತ್ವದ ವರದಾ ನದಿ ಜಲಾನಯನದ ಪರಿಸರ ಪರಿಸ್ಥಿತಿ, ಅಂತರ್ಜಲ ಸ್ಥಿತಿ ಇತ್ಯಾದಿ ಕುರಿತು ಭಾರತೀಯ ವಿಜ್ಞಾನ ಸಂಸ್ಥೆಯ ಅಧ್ಯಯನ ವರದಿಯನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.

ಈ ಸಾಲಿನಲ್ಲಿ ಕಾನು ಅರಣ್ಯ ಸಂರಕ್ಷಣೆಗಾಗಿ 4 ಕೋಟಿ ರೂ. ಹಣ ಬಿಡುಗಡೆಯಾಗಿದೆ. 112 ಎಕರೆ ಅರಣ್ಯ ಪ್ರದೇಶದಲ್ಲಿ ಕಂದಕ ತೋಡಿ ಗಿಡ ನೆಡುವ ಕೆಲಸಕ್ಕೆ ಟೆಂಡರ್ ಕರೆಯಲಾಗಿದೆ. ಕಳೆದ ವರ್ಷ 225 ಕಿ.ಮೀ. ಸುತ್ತಳತೆಯಲ್ಲಿ ಕಂದಕ ತೋಡಿ ಅರಣ್ಯ ಸಂರಕ್ಷಣೆ ಮಾಡಲಾಗಿದೆ ಎಂದರು.

ಪರಿಭಾವಿತ ಅರಣ್ಯ ಯೋಜನೆಯಿಂದಾಗಿ ಅರಣ್ಯ ರಕ್ಷಣೆಗೆ ಹೆಚ್ಚಿನ ಪ್ರಾಮುಖ್ಯತೆ ಸಿಕ್ಕಿದೆ. ಅರಣ್ಯ ಅತಿಕ್ರಮ ಮಾಡುವವರ ವಿರುದ್ಧ ಯೋಜನೆಯಡಿ ಕ್ರಮ ಕೈಗೊಳ್ಳಲು ಹಾಗೂ ತೆರವುಗೊಳಿಸಲು ಅವಕಾಶವಿದೆ. ಗ್ರಾಮ ಅರಣ್ಯ ಸಮಿತಿಗಳನ್ನು ಸದೃಢಗೊಳಿಸುವ ಕೆಲಸ ಇಲಾಖೆಯಿಂದ ನಡೆಯುತ್ತಿದೆ. ಸಮಿತಿಗಳು ಇನ್ನಷ್ಟು ಕ್ರಿಯಾಶೀಲವಾಗಿ ಕೆಲಸ ಮಾಡಿದರೆ ಅರಣ್ಯ ಸಂರಕ್ಷಣೆ ಹಾಗೂ ಸಂವರ್ಧನೆ ಸಾಧ್ಯವಿದೆ. ಮರಗಳನ್ನು ಕಡಿಯುವುದು ಪಾಪದ ಕೆಲಸ. ಪರಿಸರದ ಬಗ್ಗೆ ನಾವು ಚಿಂತನೆ ನಡೆಸದೆ ಹೋದರೆ ಮುಂದಿನ ಪೀಳಿಗೆ ಮಾರಕ ಪರಿಣಾಮ ಎದುರಿಸಬೇಕಾಗುತ್ತದೆ ಎಂದರು.

ವರದಾನದಿ ಜಲಾನಯನ ಪರಿಸರ ಪರಿಸ್ಥಿತಿ ಕುರಿತು ಪರಿಸರ ಸಂಘಟನೆಗಳು ನೀಡಿರುವ ವರದಿಯನ್ನು ಗಂಭೀರವಾಗಿ ಪರಿಗಣಿಸಿ ಅದನ್ನು ಪರಿಪಾಲಿಸುವ ಹಾಗೂ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಅರಣ್ಯ ಇಲಾಖೆಯಿಂದ ಪ್ರಯತ್ನ ನಡೆಸಲಾಗುವುದು ಎಂದು ಬ್ಯಾನರ್ಜಿ ಭರವಸೆ ನೀಡಿದರು.

ಪಶ್ಚಿಮ ಘಟ್ಟ ಕಾರ್ಯಪಡೆಯ ಮಾಜಿ ಅಧ್ಯಕ್ಷ ಅನಂತ ಹೆಗಡೆ ಅಶಿಸರ ಮಾತನಾಡಿ, ಕೇವಲ ಅಧ್ಯಯನ ವರದಿ ಯನ್ನು ಎದುರಿಗಿಟ್ಟುಕೊಂಡು ಕುಳಿತರೆ ಪ್ರಯೋಜನ ವಿಲ್ಲ. ದೇವರಕಾಡುಗಳು, ಪರಿಸರ, ಕೆರೆ, ನದಿಗಳ ಸಂರಕ್ಷಣೆಯಲ್ಲಿ ಸರ್ಕಾರದ ಜೊತೆ ನಮ್ಮ ಪಾಲ್ಗೊಳ್ಳುವಿಕೆ ಸಹ ಅಗತ್ಯ. ಶಿಕ್ಷಣ ಸಂಸ್ಥೆಗಳ ಮೂಲಕ ಪರಿಸರ ಜಾಗೃತಿ ಕಾರ್ಯಯೋಜನೆ ರೂಪಿಸಬೇಕು. 80ರ ದಶಕದಲ್ಲಿ ಗ್ರಾಮಗಳ ಸಾಮಾಜಿಕ ಭೂಮಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಜನಾಂದೋಲನ ಮಾದರಿಯಲ್ಲೇ ನಮ್ಮ ಗೋಮಾಳ, ಅರಣ್ಯಭೂಮಿ, ಪರಿಸರ, ನೈಸರ್ಗಿಕ ಸಂಪನ್ಮೂಲ ರಕ್ಷಣೆಗೆ ಸಂಬಂಧಪಟ್ಟಂತೆ ಜಿಲ್ಲೆಯ ಜನರು ಮತ್ತೊಂದು ಸುತ್ತಿನ ಹೋರಾಟ ಕೈಗೆತ್ತಿಕೊಳ್ಳುವ ಅಗತ್ಯವಿದೆ. ಸಾಗರ, ಸೊರಬ, ಹೊಸನಗರ ಭಾಗದಲ್ಲಿ ದೇವರಕಾಡು ಸಂರಕ್ಷಣೆ ಯೋಜನೆ ನಿಲ್ಲಿಸಿರುವ ಬಗ್ಗೆ ಸರ್ಕಾರದ ಗಮನ ಸೆಳೆಯಬೇಕು. ನದಿ ತಿರುವಿನಂತ ಯೋಜನೆ ಭಾರೀ ಚರ್ಚೆಯಾಗುತ್ತಿದೆ. ಜಿಲ್ಲೆಯ ಶರಾವತಿ ನದಿಯನ್ನು ಬೆಂಗಳೂರಿಗೆ ತಿರುಗಿಸಿದರೂ ಅಚ್ಚರಿ ಪಡಬೇಕಾಗಿಲ್ಲ. ಇಂತಹ ವಿಪರ್ಯಾಸಗಳ ವಿರುದ್ಧ ಸಂಘಟಿತ ಹೋರಾಟ ಅಗತ್ಯ ಎಂದರು.

ಭೀಮನಕೋಣೆ ಗ್ರಾಮ ಅರಣ್ಯ ಸಮಿತಿ ಅಧ್ಯಕ್ಷ ಬಿ.ಎಚ್. ರಾಘವೇಂದ್ರ ಅಧ್ಯಕ್ಷತೆ ವಹಿಸಿದ್ದರು. ಬೆಂಗಳೂರಿನ ಭಾರತೀಯ ವಿಜ್ಞಾನ ಮಂದಿರದ ವಿಜ್ಞಾನಿ ಡಾ। ಟಿ.ವಿ. ರಾಮಚಂದ್ರ, ಪರಿಸರ ತಜ್ಞ ಪ್ರೊ. ಬಿ.ಎಂ. ಕುಮಾರಸ್ವಾಮಿ ಇದ್ದರು. ವೆಂಕಟೇಶ್ ಕವಲಕೋಡು ಸ್ವಾಗತಿಸಿ ನಿರೂಪಿಸಿದರು.



**ಸಾಗರ: ನಗರದ ಮಲೆನಾಡುಸಿರಿ ಸಭಾಂಗಣದಲ್ಲಿ ವರದಾ ನದಿ ಜಲಾನಯನದ ಪರಿಸರ ಪರಿಸ್ಥಿತಿ, ಅಂತರ್ಜಲ ಸ್ಥಿತಿ ಇತ್ಯಾದಿ ಕುರಿತು ಭಾರತೀಯ ವಿಜ್ಞಾನ ಸಂಸ್ಥೆಯ ಅಧ್ಯಯನ ವರದಿಯನ್ನು ಬಿಡುಗಡೆ ಮಾಡಲಾಯಿತು.**